159ನ್‌ಲ 6
(14)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ ಇವರ ನಿಯಮ 72ರ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ಪ್ರಶ್ನೆ:**

ರಾಜ್ಯದಲ್ಲಿ ಉತ್ತಮವಾಗಿ ನಡೆಯುತ್ತಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2020 ರಿಂದ ಪ್ರಸ್ತುತ ಅವಧಿಯವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಹಲವಾರು ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಿದ್ದರೂ, ಸಹ ನೇಮಕಾತಿ ಅನುಮೋದನೆ ಪ್ರಕ್ರಿಯೆ ಪ್ರಾರಂಭ ಮಾಡದೆ ಇರುವುದರಿಂದ ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ಸದರಿ ಖಾಲಿ ಹುದ್ದೆಗಳಲ್ಲಿ ವಯೋಮಿತಿ ಮೀರಿರುವ ಹಲವಾರು ಶಿಕ್ಷಕರು ಅನುದಾನಕ್ಕೊಳಪಡಸಬಹುದೆಂಬ ಆಸೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿ ಹುದ್ದೆಗಳನ್ನು ತುಂಬುವವರೆಗೆ ಸರ್ಕಾರಿ ಶಾಲೆಗಳಲ್ಲಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿರುವಂತೆ ಅನುದಾನಿತ ಶಾಲೆಗಳಿಗೂ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿ ಸರ್ಕಾರದಿಂದಲೇ ವೇತನ ನೀಡಬೇಕು ಹಾಗೂ ಡಿಸೆಂಬರ್ 2025ರವರೆಗೆ ಅನುದಾನಿತ ಶಾಲೆಗಳಲ್ಲಿ ಖಾಲಿ ಆಗಿರುವ ಹುದ್ದೆಗಳನ್ನು ವೇತನಾನುದಾನಕ್ಕೊಳಪಡಿಸಬೇಕೆಂಬ ವಿಷಯವನ್ನು ನಿಯಮ 72 ರಲ್ಲಿ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 01-01-2016 ರಿಂದ 31-12-2020ರ ಅವಧಿಯವರೆಗೆ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಈಗಾಗಲೇ ತಂತ್ರಾಂಶವನ್ನು ಸಿದ್ಧಪಡಿಸಲಾಗಿದ್ದು ಪ್ರಕ್ರಿಯೆ ಚಾಲ್ತಿಯಲ್ಲಿದ್ದು ಬಿ.ಇ.ಓ ಹಂತ (ಮೊದಲನೇ ಹಂತ) ಮುಗಿದಿರುತ್ತದೆ ಹಾಗೂ ಶಾಲಾ ಆಡಳಿತ ಮಂಡಳಿಯವರ ಇಂಧೀಕರಣ ಕಾರ್ಯ (ಎರಡನೇ ಹಂತ) ಚಾಲ್ತಿಯಲ್ಲಿರುತ್ತದೆ.

ದಿನಾಂಕ: 08.05.2026ರಂದು ಸಮಾಜ ಕಲ್ಯಾಣ ಇಲಾಖೆಯು ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 515 ಪಕವಿ 2026ರಂತೆ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಬೇಕಾದ ರಿಕ್ತ ಸ್ಥಾನಗಳಿಗೆ ಅನುರಿಸಬೇಕಾದ 400 ಬಿಂದುಗಳ ರೋಸ್ಟರಂತೆ ವಿವಿಧ ನೇಮಕಾತಿ / ಆಯ್ಕೆ ಪ್ರಾಧಿಕಾರಗಳು ನೇರ ನೇಮಕಾತಿ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳನ್ನು ಸಿಆಸು ಇಲಾಖೆಯು ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026ರಲ್ಲಿ ತಿಳಿಸಿದ್ದು, ಅದರನ್ವಯ ಕ್ರಮವಹಿಸುವಂತೆ ಎಲ್ಲಾ ನೇಮಕಾತಿ / ಆಯ್ಕೆ ಪ್ರಾಧಿಕಾರಿಗಳಿಗೆ ಸೂಚನೆಯನ್ನು ನೀಡಲಾಗಿದೆ. ಈ ಆದೇಶದಲ್ಲಿ ಸೂಚಿಸಿರುವ ಕ್ರಮಗಳನ್ವಯ ತಂತ್ರಾಂಶವನ್ನು ಮಾರ್ಪಡಿಸಲು ಆಯುಕ್ತಾಲಯದಿಂದ ಕ್ರಮವಹಿಸುತ್ತಿದ್ದು, ಆ ನಂತರ ಶಾಲಾ ಆಡಳಿತ ಮಂಡಳಿಗಳಿಂದ ಪ್ರಸ್ತಾವನೆಗಳನ್ನು ನಿರೀಕ್ಷಿಸಲಾಗಿದೆ.

ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿಯಿರುವ ಖಾಯಂ ಶಿಕ್ಷಕರ ಹುದ್ದೆಗಳನ್ನು ತುಂಬುವವರೆಗೆ ಕಾರ್ಯಭಾರಕ್ಕನುಗಣವಾಗಿ ಅತಿಥಿ ಶಿಕ್ಷಕ/ಉಪನ್ಯಾಸಕರನ್ನು ನೇಮಕಾತಿ ಮಾಡಿ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣಕ್ಕೆ ತೊಂದರೆಯಾಗದಂತೆ ಕ್ರಮಕೈಗೊಳ್ಳಲಾಗಿದ್ದು, ಸದರಿ ಅತಿಥಿ ಶಿಕ್ಷಕರು ಕಾರ್ಯ ನಿರ್ವಹಿಸಿದ ಅವಧಿಗೆ ಗೌರವ ಸಂಭಾವನೆಯನ್ನು ನೀಡಲಾಗುತ್ತದೆ. ಆದರೆ, ಅನುದಾನಿತ ಶಾಲೆಗಳಲ್ಲಿರುವ ಅತಿಥಿ ಶಿಕ್ಷಕರಿಗೆ ಸರ್ಕಾರದಿಂದ ವೇತನ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಮುಂದುವರೆದು, ಆರ್ಥಿಕ ಇಲಾಖೆಯ ಸಹಮತಿಯನ್ವಯ 1994-95 ರ ಶೈಕ್ಷಣಿಕ ಅವಧಿಗೆ ಪೂರ್ವದಲ್ಲಿ ಪ್ರಾರಂಭಗೊಂಡು ಈಗಾಗಲೇ ವೇತನಾನುದಾನಕ್ಕೆ ಒಳಪಟ್ಟ ಖಾಸಗಿ ಅನುದಾನಿತ ಪ್ರೌಢಶಾಲೆಗಳು, ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ: 01.01.2016 ರಿಂದ ದಿನಾಂಕ: 31.12.2020ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಮತ್ತಿತರ ಕಾರಣಗಳಿಂದ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಹಲವು ಷರತ್ತುಗಳಿಗೊಳಪಟ್ಟು ಭರ್ತಿ ಮಾಡಿಕೊಳ್ಳಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ. ಆದರೆ, ದಿನಾಂಕ: 31.12.2020ರ ನಂತರದಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಮತ್ತಿತರ ಕಾರಣಗಳಿಂದ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ತುಂಬಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಹಾಗೂ ಪ್ರಸ್ತುತ ಇಂತಹ ಪ್ರಸ್ತಾವವು ಸರ್ಕಾರದ ಮುಂದಿರುವುದಿಲ್ಲ.

ಸಂಖ್ಯೆ: ಇಪಿ 254 ಎಸ್‌ಇಎಸ್ 2026

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು